ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

DTE-ADMI0ACM2/74/2022

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು - 560 001.
ದಿನಾಂಕ:12-10-2022.

-:: ಸುತ್ತೋಲೆ ::-

**ವಿಷಯ:** 2022-23ನೇ ಶೈಕ್ಷಣಿಕ ಸಾಲಿಗೆ ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು ಈ ಸಂಸ್ಥೆಯಲ್ಲಿನ (1) Travel & Tourism (2) Cyber Physical Systems & Security ಕೋರ್ಸುಗಳಲ್ಲಿನ ಭರ್ತಿ ಆಗದ ಉಳಿಕೆ ಸೀಟುಗಳಿಗೆ ಪ್ರವೇಶ ಅವಧಿಯನ್ನು ವಿಸ್ತರಿಸಿರುವ ಬಗ್ಗೆ.

**ಉಲ್ಲೇಖ:-**
1. ಈ ಕಛೇರಿ ಸಮಸಂಖ್ಯೆ ಪ್ರವೇಶಾಧಿಸೂಚನೆ ದಿ:16-08-2022.
2. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ದಿನಾಂಕ: 25-08-2022, 13-09-2022 & 29-09-2022.

-********-

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(2)ರ ದಿ:29-09-2022ರ ಈ ಕಛೇರಿ ಸುತ್ತೋಲೆಯಲ್ಲಿ ಬೆಂಗಳೂರಿನ ಎಸ್.ಜೆ.ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ಅಂತರಾಷ್ಟ್ರೀಯ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ನಡೆಸಲಾಗುತ್ತಿರುವ (International Twinning Program) (1) Travel & Tourism (2) Cyber Physical Systems & Security ಕೋರ್ಸುಗಳಿಗೆ ಆಯ್ಕೆ ಪಟ್ಟಿ ಪ್ರಕಟಿಸಿ ಆಯ್ಕೆಯಾದ ಅಭ್ಯರ್ಥಿಗಳು ದಿ:11-10-2022ರ ಒಳಗೆ ಪ್ರವೇಶ ಪಡೆಯಲು ದಿನಾಂಕವನ್ನು ನಿಗಧಿಪಡಿಸಲಾಗಿತ್ತು.

ಆದರೆ, ಸದರಿ **Travel & Tourism** ಮತ್ತು **Cyber Security** ಕೋರ್ಸುಗಳಲ್ಲಿ ಭರ್ತಿ ಆಗದೆ ಕೆಲವು ಸೀಟುಗಳು ಖಾಲಿ ಉಳಿದಿರುತ್ತವೆ ಎಂದು ಹಾಗೂ ಈ ಸೀಟುಗಳಿಗೆ ಪ್ರವೇಶ ಅವಧಿಯನ್ನು ವಿಸ್ತರಿಸಲು ಸಂಬಂಧಪಟ್ಟ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರು ಕೋರಿರುವ ಹಿನ್ನೆಲೆಯಲ್ಲಿ ಸದರಿ ಕೋರ್ಸುಗಳಿಗೆ ಈಗಾಗಲೇ ಪ್ರವೇಶ ಕೋರಿ ಅರ್ಜಿ ಸಲ್ಲಿಸಿ, ಪ್ರವೇಶ ಪರೀಕ್ಷೆ ಬರೆದು **ಪ್ರವೇಶ ಪಡೆಯಲು ಆಸಕ್ತಿ ಹೊಂದಿರುವ ವಿದ್ಯಾರ್ಥಿಗಳು ದಿ:17-10-2022ರ ಸೋಮವಾರದಂದು ಸಮಯ ಬೆಳಿಗ್ಗೆ 10.30ಕ್ಕೆ ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು ಇಲ್ಲಿ ಖುದ್ದು ಹಾಜರಾಗಿ ಉಳಿಕೆ ಸೀಟುಗಳಿಗೆ ಪ್ರವೇಶಾತಿ ಪಡೆಯಲು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.**

ಪ್ರಾಂಶುಪಾಲರು ಮೇಲ್ಕಂಡಂತೆ ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತರಲು ಸೂಚಿಸಿದೆ. *ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್* **dtetech.karnataka.gov.in/kartechnical** *ನ್ನು ನೋಡುವುದು ಅಥವಾ ಸಮೀಪ ಇರುವ ಸರ್ಕಾರಿ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರನ್ನು ಸಂಪರ್ಕಿಸುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.*

*ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.*

12/10/22
ಜಂಟಿ ನಿರ್ದೇಶಕರು(ಆಡಳಿತ)
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

ರಾಜ್ಯದ ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ - ಮಾಹಿತಿಗಾಗಿ & ಮುಂದಿನ ಅಗತ್ಯ ಕ್ರಮಕ್ಕಾಗಿ ಹಾಗೂ ಸಂಸ್ಥೆಯ ಸೂಚನಾ ಫಲಕದಲ್ಲಿ ಅಭ್ಯರ್ಥಿಗಳ ಮತ್ತು ಪೋಷಕರ ಗಮನಕ್ಕೆ ಪ್ರಕಟಿಸುವುದು.

**ಪ್ರತಿ ಮಾಹಿತಿಗಾಗಿ:-**

1) ಮಾನ್ಯ ಆಯುಕ್ತರ ಆಪ್ತಶಾಖೆಗೆ.
2) ಮಾನ್ಯ ನಿರ್ದೇಶಕರ ಆಪ್ತಶಾಖೆಗೆ.
3) ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
4) ಜಂಟಿ ನಿರ್ದೇಶಕರು(ಸಿಡಿಸಿ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
5) ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು
6) ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು,
7) ಪ್ರಾಂಶುಪಾಲರು, ಸರ್ಕಾರಿ ಎಸ್.ಜೆ. ಪಾಲಿಟೆಕ್ನಿಕ್, ಬೆಂಗಳೂರು - ಮಾಹಿತಿಗಾಗಿ & ಮುಂದಿನ ಅಗತ್ಯ ಕ್ರಮಕ್ಕಾಗಿ
6) ಡಿವಿಪಿ(1) ಮತ್ತು ಡಿವಿಪಿ(2) ವಿಭಾಗಕ್ಕೆ.
7) ಇ-ಆಡಳಿತ ವಿಭಾಗಕ್ಕೆ - ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
8) ಕಡತಕ್ಕೆ.